Akashvani : Bangalore

Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

24.06.2024 18.40 hrs

<><*<><>*><>

<u>ಮುಖ್ಯಾಂಶಗಳು</u>

- **೧. ರಾಜ್ಯದ ಎಲ್ಲ ಸರ್ಕಾರಿ ಆಸ್ಪತ್ರೆಗಳಿಗೆ ಹಂತ ಹಂತವಾಗಿ ವೈದ್ಯರ ನೇಮಕ - ಆರೋಗ್ಯ ಸಚಿವ ದಿನೇಶ್ ಗುಂಡೂರಾವ್**
- **೨. ಅಂಗನವಾಡಿಗಳಲ್ಲಿ ಇನ್ನು ಮುಂದೆ ಎಲ್‌ಕೆಜಿ, ಯುಕೆಜಿ ಆರಂಭಿಸಲು ಸರ್ಕಾರ ನಿರ್ಧಾರ**
- **೩. ರಾಜ್ಯದಲ್ಲಿ ಪ್ರವಾಹ ಪರಿಸ್ಥಿತಿ ಎದುರಿಸಲು ಸರ್ಕಾರ ಸನ್ನದ್ಧ- ಕಂದಾಯ ಸಚಿವ ಕೃಷ್ಣ ಬೈರೇಗೌಡ**
- **೪. ಸಂಸ್ಕೃತ ಭಾಷೆ ಭಾರತೀಯ ಸಂಪ್ರದಾಯದ ಅವಿಭಾಜ್ಯ ಅಂಗ- ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್**

<><*<><>*><>

ರಾಜ್ಯದ ಎಲ್ಲಾ ಆಸ್ಪತ್ರೆಗಳಲ್ಲಿ ವೈದ್ಯರು, ಸಿಬ್ಬಂದಿಗಳ ಕೊರತೆ ಇದ್ದು, ಹಂತ ಹಂತವಾಗಿ ವೈದ್ಯರ ನೇಮಕ ಮಾಡಲಾಗುವುದು ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ. ಮಡಿಕೇರಿಯಲ್ಲಿಂದು ಮಾತನಾಡಿದ ಅವರು, ಸರ್ಕಾರಿ ಆಸ್ಪತ್ರೆಯಲ್ಲಿಯೇ ಎಲ್ಲಾ ರೀತಿಯ ಆರೋಗ್ಯ ಸೌಲಭ್ಯ ದೊರೆಯುವಂತಾಗಲು ಪ್ರಯತ್ನಿಸಲಾಗುವುದು ಎಂದು ಹೇಳಿದರು. ಇನ್ನು ಮೂರು ನಾಲ್ಕು ತಿಂಗಳಲ್ಲಿ ಶೇಕಡ ೧೦೦ ರಷ್ಟು ಗುರಿ ತಲುಪಲಾಗುವುದು ಎಂದು ತಿಳಿಸಿದರು.  ವೈದ್ಯರು ಕಡ್ಡಾಯವಾಗಿ ಗ್ರಾಮೀಣ ಸೇವೆ ಸಲ್ಲಿಸಬೇಕು ಎಂದರು.

<><*<><>*><>

ರಾಜ್ಯದ ಅಂಗನವಾಡಿ ಕೇಂದ್ರಗಳ ಉನ್ನತೀಕರಣ ಹಾಗೂ ಅಂಗನವಾಡಿ ಕೇಂದ್ರಗಳಲ್ಲಿ ಪೂರ್ವ ಪ್ರಾಥಮಿಕ ಶಾಲೆ ಆರಂಭಿಸುವ ಕುರಿತು ಬೆಂಗಳೂರಿನ ವಿಧಾನಸೌಧದಲ್ಲಿ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೊಂದಿಗೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಚರ್ಚೆ ನಡೆಸಿದರು.  ಬಳಿಕ ಮಾತನಾಡಿದ ಲಕ್ಷ್ಮೀ ಹೆಬ್ಬಾಳ್ಕರ್, ಪ್ರಸ್ತುತ ೨ ಸಾವಿರದ ೬೦೦ ಶಾಲೆಗಳಲ್ಲಿ ಎಲ್.ಕೆ.ಜಿ., ಯು.ಕೆ.ಜಿ ಆರಂಭಕ್ಕೆ ಸುತ್ತೋಲೆ ಹೊರಡಿಸಲಾಗಿದೆ. ಈ ಬಗ್ಗೆ ಅಂಗನವಾಡಿ ಕಾರ್ಯಕರ್ತೆಯರ ಜೊತೆ ಚರ್ಚೆ ನಡೆಸಿದ್ದೇವೆ. ಯಾರನ್ನೂ ಕೆಲಸದಿಂದ ತೆಗೆಯುವುದಿಲ್ಲ ಎಂದು ಅವರು ತಿಳಿಸಿದ್ದಾರೆ.

<><*<><>*><>

ರಾಜ್ಯದಲ್ಲಿ ಪ್ರವಾಹ ಪರಿಸ್ಥಿತಿ ಎದುರಿಸಲು ಸರ್ಕಾರ ಸನ್ನದ್ಧವಾಗಿದೆ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ತಿಳಿಸಿದ್ದಾರೆ. ಕಲಬುರ್ಗಿಯಲ್ಲಿ ನಡೆದ ಕಂದಾಯ ಇಲಾಖೆ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಪ್ರಸಕ್ತ ವರ್ಷ ಹೆಚ್ಚಿನ ಮಳೆಯ ನಿರೀಕ್ಷೆ ಹಿನ್ನೆಲೆಯಲ್ಲಿ ಪ್ರವಾಹದಿಂದ ಆಗಬಹುದಾದ ಜನ-ಜಾನುವಾರಗಳ ಹಾನಿ ತಪ್ಪಿಸುವುದು ನಮ್ಮೆಲ್ಲರ ಮೊದಲ ಆದ್ಯತೆಯಾಗಬೇಕು ಎಂದು ಹೇಳಿದರು. ಈ ನಿಟ್ಟಿನಲ್ಲಿ ಅಧಿಕಾರಿಗಳು ಮುತುವರ್ಜಿವಹಿಸಿ ಕೆಲಸ ಮಾಡಬೇಕು ಎಂದು ಸೂಚಿಸಿದರು.

<><*<><>*><>

ರಾಮನಗರ ಜಿಲ್ಲೆ ಚನ್ನಪಟ್ಟಣ ತಾಲೂಕಿನ ಕೋಡಂಬಳ್ಳಿಯಲ್ಲಿ ನಡೆದ 'ಬಾಗಿಲಿಗೆ ಬಂತು ಸರಕಾರ, ಸೇವೆಗೆ ಇರಲಿ ಸಹಕಾರ" ಕಾರ್ಯಕ್ರಮದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿದರು. ಇದಕ್ಕೂ ಮೊದಲು ಕಾರ್ಯಕ್ರಮದ ಉದ್ದೇಶ, ಸಮಸ್ಯೆಗಳಿಗೆ ಪರಿಹಾರ ಕಲ್ಪಿಸುವ ಪ್ರಕ್ರಿಯೆ ಕುರಿತು ಮಾತನಾಡಿದರು. ಜಿಲ್ಲಾ ಉಸ್ತುವಾರಿ ಸಚಿವ ರಾಮಲಿಂಗಾರೆಡ್ಡಿ, ಪರಿಷತ್ ಸದಸ್ಯ ರವಿ, ಜಿಲ್ಲಾಧಿಕಾರಿ ಅವಿನಾಶ್ ಮೆನನ್ ಸೇರಿದಂತೆ ಹಲವು ಅಧಿಕಾರಿಗಳು ಉಪಸ್ಥಿತರಿದ್ದರು.

<><*<><>*><>

ದೇಶಾದ್ಯಂತ ನಡೆದ ನೀಟ್ ಪ್ರಕರಣ ಕುರಿತಂತೆ ಕೇಂದ್ರ ಸರ್ಕಾರ ನಿಷ್ಪಕ್ಷಪಾತವಾಗಿ ತನಿಖೆ ನಡೆಸುತ್ತಿದೆ ಎಂದು ಬೆಂಗಳೂರಿನ ನಿಮ್ಹಾನ್ಸ್ ವೈದ್ಯಕೀಯ ಸಂಸ್ಥೆಯ ಸಾಂಕ್ರಮಿಕ ರೋಗ ವಿಭಾಗದ ಪ್ರಾಧ್ಯಾಪಕ ಡಾ.ಪ್ರಚೇತ್ ತಿಳಿಸಿದ್ದಾರೆ. ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ವಿದ್ಯಾರ್ಥಿಗಳು ಸಾಮಾಜಿಕ ಮಾಧ್ಯಮಗಳಿಂದ ದೂರವಿರುವಂತೆ ತಿಳಿಸಿದ್ದಾರೆ. ವಿದ್ಯಾರ್ಥಿಗಳು ಯಾವುದೇ ಕಾರಣಕ್ಕೂ ಧೃತಿಗೆಡದಂತೆ ಮನವಿ ಮಾಡಿದ್ದಾರೆ.

**ಧ್ವನಿ: ಡಾ.ಪ್ರಚೇತ್**

<><*<><>*><>

ಅಸಹಜ ಲೈಂಗಿಕ ದೌರ್ಜನ್ಯ ಪ್ರಕರಣದಲ್ಲಿ ವಿಧಾನಪರಿಷತ್ ಸದಸ್ಯ ಸೂರಜ್ ರೇವಣ್ಣ ಅವರನ್ನು ಎಂಟು ದಿನ ಸಿಐಡಿ ಕಸ್ಟಡಿಗೆ ನೀಡಿ ಜನಪ್ರತಿನಿದಿಗಳ ವಿಶೇಷ ನ್ಯಾಯಾಲಯ ಆದೇಶ ಪ್ರಕಟಿಸಿದೆ. ೧೪ ದಿನಗಳ ನ್ಯಾಯಾಂಗ ಬಂಧನದಲ್ಲಿರುವ ಸೂರಜ್ ರೇವಣ್ಣ ಅವರನ್ನು ಜುಲೈ ೧೮ವರೆಗೆ ಸಿಐಡಿ ಕಸ್ಟಡಿಗೆ ಒಪ್ಪಿಸಲಾಗಿದೆ. ಈ ಮಧ್ಯೆ ಸೂರಜ್ ರೇವಣ್ಣ ವಿರುದ್ಧ ದೂರು ದಾಖಲಿಸಿದ್ದ ಅವರ ಆಪ್ತ ಶಿವಕುಮಾರ್ ನಾಪತ್ತೆಯಾಗಿದ್ದು, ಅವರಿಗಾಗಿ ಪೊಲೀಸರು ಶೋಧ ಕಾರ್ಯ ನಡೆಸುತ್ತಿದ್ದಾರೆ.

<><*<><>*><>

ಸಂಸ್ಕೃತ ಭಾಷೆ ಭಾರತೀಯ ಸಂಪ್ರದಾಯದ ಅವಿಭಾಜ್ಯ ಅಂಗವಾಗಿದೆ ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ತಿಳಿಸಿದ್ದಾರೆ. ರಾಜಭವನದಲ್ಲಿ ಆಯೋಜಿಸಲಾಗಿದ್ದ ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ ಬೆಂಗಳೂರಿನ ಸಂಸ್ಥಾಪನ ದಿನಾಚರಣೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಸಂಸ್ಕೃತ, ಪ್ರಪಂಚದ ಏಕೈಕ ಪ್ರಾಚೀನ ಭಾಷೆಯಾಗಿದ್ದು, ಕಾವ್ಯ, ತರ್ಕ, ವ್ಯಾಕರಣ, ತತ್ವಶಾಸ್ತ್ರ, ಸೌಂದರ್ಯಶಾಸ್ತ್ರ, ವಿಜ್ಞಾನ ಮತ್ತು ತಂತ್ರಜ್ಞಾನ, ಗಣಿತ ಮತ್ತು ಸಂಬಂಧಿತ ವಿಷಯಗಳ ಕ್ಷೇತ್ರಗಳಲ್ಲಿ ಶ್ರೀಮಂತ ಜ್ಞಾನದ ಸಂಗ್ರಹವನ್ನು ಹೊಂದಿದೆ ಎಂದು ಹೇಳಿದರು. ಈ ಸಂಸ್ಕೃತ ವಿಶ್ವವಿದ್ಯಾನಿಲಯವು ಸಂಸ್ಕೃತದ ಪ್ರಚಾರದಲ್ಲಿ ತನ್ನ ಪಾತ್ರ ನಿರ್ವಹಿಸುವುದನ್ನು ಮುಂದುವರಿಸಲಿ ಎಂದು ತಿಳಿಸಿದರು.

<><*<><>*><>

ಭಾರತೀಯ ತರಕಾರಿ ಜಾಗತಿಕ ಮಟ್ಟದಲ್ಲಿ ಮಾರಾಟವಾಗುವಂತಾಗಬೇಕು ಎಂದು ಅಬಕಾರಿ ಹಾಗೂ ಬಾಗಲಕೋಟೆ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ತಿಳಿಸಿದ್ದಾರೆ. ತೋಟಗಾರಿಕಾ ವಿಶ್ವವಿದ್ಯಾಲಯದ ಆವರಣದಲ್ಲಿ ಹಮ್ಮಿಕೊಂಡಿದ್ದ ಮೂರು ದಿನಗಳ ಸಸ್ಯ ಸಂತೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು ತರಕಾರಿ ಬೆಳೆಗಳು ಇಂದು ವಿಷಪೂರಿತವಾಗಿದೆ ಎಂದು ಆತಂಕ ವ್ಯಕ್ತಪಡಿಸಿದರು. ಜವಾರಿ ಎನಿಸಿಕೊಂಡ ಜೋಳ ಕೂಡಾ ಇಂದು ಕಲಬೆರಕೆಯಾಗಿದೆ. ಸಾವಯವ ಕೃಷಿ ಪದ್ಧತಿ ಬಳಸಿಕೊಂಡು ಕಲಬೆರಕೆ ರಹಿತ, ರಾಸಾಯನಿಕ ಬಳಸದ ತರಕಾರಿಗಳನ್ನು ಬೆಳೆಯಲು ಕರೆ ನೀಡಿದರು.

<><*<><>*><>

ಕೋಲಾರದಲ್ಲಿ ಭೂಮಿಯಲ್ಲಿ ಪೋಷಕಾಂಶ ಕೊರತೆ, ಹವಾಮಾನ ವೈಪರೀತ್ಯ, ಬಿತ್ತನೆ ಸಮಸ್ಯೆ ಸೇರಿದಂತೆ ಹಲವು ಕಾರಣಗಳಿಂದ ಟೊಮ್ಯಾಟೊ ಇಳುವರಿ ಕುಂಠಿತಗೊಂಡಿದೆ. ಜಿಲ್ಲೆಯಲ್ಲಿ ೯೭ ಸಾವಿರದ ೮೦೫ ಹೆಕ್ಟೇರ್ ತೋಟಗಾರಿಕೆ ಪ್ರದೇಶವಿದ್ದು, ಆ ಪೈಕಿ ೪೮ ಸಾವಿರದ ೭೨೯ ಹೆಕ್ಟೇರ್ ಪ್ರದೇಶದಲ್ಲಿ ಹಣ್ಣು, ೪೦ ಸಾವಿರದ ೫೭೧ ಹೆಕ್ಟೇರ್ ಪ್ರದೇಶದಲ್ಲಿ ತರಕಾರಿ ಬೆಳೆಯಲಾಗುತ್ತಿದ್ದು, ಜಿಲ್ಲೆಯಲ್ಲಿ ಟೊಮ್ಯಾಟೊ ಪ್ರಮುಖ ವಾಣಿಜ್ಯ ಬೆಳೆಯಾಗಿದೆ. ಈ ಬಾರಿ ಟೊಮ್ಯಾಟೊ ಬೆಳೆ ಎಲೆ ಮುದುಡು ನಂಜುರೋಗ ಮತ್ತು ದುಂಡಾಣು ಸೊರಗು ರೋಗಕ್ಕೆ ತುತ್ತಾಗಿದೆ. ನಾಲ್ಕೈದು ವರ್ಷಗಳಿಂದ ಟೊಮ್ಯಾಟೊ ಬೆಳೆಗೆ ನಾನಾ ರೀತಿಯ ರೋಗಗಳು ತಗುಲುತ್ತಿದ್ದು, ಹಾಕಿದ ಬಂಡವಾಳ ಪಡೆಯುವುದು ಕಷ್ಟವಾಗುತ್ತಿದೆ ಎಂದು ಅಮ್ಮೇರಳ್ಳಿಯ ರೈತ ವರದಪ್ಪ ತಿಳಿಸಿದ್ದಾರೆ.

<><*<><>*><>

ಧಾರವಾಡ ಜಿಲ್ಲಾಧಿಕಾರಿ ದಿವ್ಯ ಪ್ರಭು ಸ್ಥಳದಲ್ಲೇ ಇಂದು ಸಾರ್ವಜನಿಕರ ಅಹವಾಲುಗಳಿಗೆ ಪರಿಹಾರ ನೀಡಿದ್ದಾರೆ. ಬೆಳೆ ಹಾನಿ ಪರಿಹಾರ, ಪಿಂಚಣಿ, ರಸ್ತೆಗಳು, ವಿದ್ಯುತ್ ಸಮಸ್ಯೆ, ಕುಡಿಯುವ ನೀರು ಸೇರಿದಂತೆ ಹಲವಾರು ಸಮಸ್ಯೆಗಳ ಕುರಿತ ಸುಮಾರು ೧೦೦ ಕ್ಕೂ ಅಧಿಕ ಅರ್ಜಿಗಳು ಸಲ್ಲಿಕೆಯಾಗಿದ್ದವು. ಹೆಸ್ಕಾಂ ಅಧಿಕಾರಿಗಳು ವಿದ್ಯುತ್ ಕಂಬಗಳನ್ನು ಸರಿಪಡಿಸಬೇಕು. ಜನರಿಗೆ

ಅವಶ್ಯಕ ವಿದ್ಯುತ್ ಪೂರೈಕೆ ಮಾಡಬೇಕು. ಹೆಸ್ಕಾಂ ಅಧಿಕಾರಿಗಳು ತೆಗೆದುಕೊಂಡ ಕ್ರಮಗಳ ಬಗ್ಗೆ ಎಲ್ಲ ತಹಶೀಲ್ದಾರರು ಮೇಲ್ವಿಚಾರಣೆ ನಡೆಸಬೇಕು ಎಂದು ಹೆಸ್ಕಾಂ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

<><*<><>*><>

ಸಂಕ್ಷಿಪ್ತ ಸುದ್ದಿಗಳು...

೧. ಹಾಸನ ಜಿಲ್ಲಾ ಪೊಲೀಸ್ ಸರಹದ್ದಿನಲ್ಲಿ ಕಳ್ಳತನವಾಗಿದ್ದ ಚಿನ್ನಾಭರಣ ಹಾಗೂ ನಗದನ್ನು ಗೃಹಸಚಿವ ಜಿ.ಪರಮೇಶ್ವರ್ ಇಂದು ಎಸ್ಪಿ ಕಚೇರಿ ಆವರಣದಲ್ಲಿ ವಾರಸುದಾರರಿಗೆ ಹಿಂದಿರುಗಿಸಿದರು.

೨. ಅಧಿಕ ಮಳೆಯಿಂದಾಗಿ ಸಂಭವನೀಯ ಪ್ರವಾಹ ಪರಿಸ್ಥಿತಿ ಎದುರಾದಲ್ಲಿ ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಕುರಿತು ಬೆಳಗಾವಿ ಜಿಲ್ಲೆಯ ಗ್ರಾಮ ಪಂಚಾಯತ್‌ಗಳಲ್ಲಿ ಪ್ರತಿ ತಿಂಗಳು ಕಡ್ಡಾಯವಾಗಿ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆ ಜರುಗಿಸುವಂತೆ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

೩. ಕೋಲಾರ ಜಿಲ್ಲೆಯ ಕೆಜಿಎಫ್ ತಾಲೂಕಿನಲ್ಲಿ ಎಲ್ಲಾ ಪೊಲೀಸ್ ಠಾಣೆಗಳ ಸರಹದ್ದುಗಳಲ್ಲಿ ಆಟೋ ಚಾಲಕರಿಗೆ ರಸ್ತೆ ಸುರಕ್ಷತೆ ಕುರಿತು ಜಾಗೃತಿ ಮೂಡಿಸಲಾಯಿತು. ಶಾಲಾ ಮಕ್ಕಳನ್ನು ನಿಗದಿತ ಸಂಖ್ಯೆಗಿಂತ ಹೆಚ್ಚಾಗಿ ಕರೆದೊಯ್ಯಬಾರದು ಎಂದು ಕೆಜಿಎಫ್ ಪೊಲೀಸರು ಸೂಚಿಸಿದ್ದಾರೆ.

೪. ಕೇಂದ್ರ ಸರ್ಕಾರದ ಪೋಷಣ್ ಅಭಿಯಾನದಡಿ ಇಂದು ಚಿಕ್ಕಬಳ್ಳಾಪುರ ಜಿಲ್ಲೆ ಶಿಡ್ಲಘಟ್ಟ ತಾಲ್ಲೂಕಿನ ಮೇಲೂರು ಗ್ರಾಮದಲ್ಲಿ ೩೪೪ ಅಂಗನವಾಡಿ ಕಾರ್ಯಕರ್ತೆಯರಿಗೆ ಮೊಬೈಲ್ ವಿತರಿಸುವ ಕಾರ್ಯಕ್ರಮಕ್ಕೆ ಸ್ಥಳೀಯ ಶಾಸಕ ಬಿ.ಎನ್.ರವಿಕುಮಾರ್ ಚಾಲನೆ ನೀಡಿದರು.

೫. ಚಿಕ್ಕಬಳ್ಳಾಪುರ ಜಿಲ್ಲೆ ಗುಡಿಬಂಡೆ ತಾಲ್ಲೂಕಿನ ಸೋಮೇನಹಳ್ಳಿಯಲ್ಲಿಂದು ಬಾಗೇಪಲ್ಲಿ ಶಾಸಕ ಎಸ್.ಎನ್.ಸುಬ್ಬಾರೆಡ್ಡಿ ಜಲಜೀವನ್ ಮಿಷನ್ ಯೋಜನೆಯಡಿಯ ೧ ಕೋಟಿ ೪೦ ಲಕ್ಷ ರೂಪಾಯಿ ಮೊತ್ತದ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿದರು.

೬. ಮಂಡ್ಯ ಜಿಲ್ಲೆಯ ಮಳವಳ್ಳಿ ಪಟ್ಟಣದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿಂದು ಜನಸ್ಪಂದನ ಕಾರ್ಯಕ್ರಮ ನಡೆಯಿತು. ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಡಾ.ಕುಮಾರ, ಎಸ್ಪಿ ಯತೀಶ್ ಸೇರಿದಂತೆ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಪಾಲ್ಗೊಂಡು ನೆರೆದಿದ್ದ ಮಳವಳ್ಳಿ ತಾಲ್ಲೂಕಿನ ನೂರಾರು ಜನರ ಅಹವಾಲು ಸ್ವೀಕರಿಸಿ, ಸಮಸ್ಯೆ ಬಗೆಹರಿಸಿದರು.

೭. ತೃತಿಯ ಲಿಂಗಿಗಳು ಭಿಕ್ಷಾಟನೆ ತೊರೆದು ಸ್ವಾಭಿಮಾನ ಹಾಗೂ ಸ್ವಾವಲಂಬಿ ಜೀವನ ನಡೆಸುವ ನಿಟ್ಟಿನಲ್ಲಿ ವಿವಿಧ ಉದ್ಯಮಗಳಲ್ಲಿ ತೊಡಗಬೇಕು. ಇದರಿಂದ ಉದ್ಯೋಗ ಸೃಷ್ಟಿಯಾಗಲಿದೆ ಎಂದು ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಜಿ.ಪದ್ಮಾವತಿ ಚಿತ್ರದುರ್ಗದಲ್ಲಿ ತಿಳಿಸಿದ್ದಾರೆ.

<><*<><>*><>

ಇನ್ನು ಹವಾವರ್ತಾಮಾನ....

ಕರಾವಳಿ ಮತ್ತು ದಕ್ಷಿಣ ಒಳನಾಡಿನ ಹಲವೆಡೆ ಇಂದು ಭಾರೀ ಮಳೆಯಾಗುವ ಸಾಧ್ಯತೆ ಇದೆ. ಹವಾಮಾನ ಇಲಾಖೆಯು ಉತ್ತರ ಕನ್ನಡ, ಉಡುಪಿ, ದಕ್ಷಿಣ ಕನ್ನಡ, ಬೆಳಗಾವಿ, ಧಾರವಾಡ, ಹಾವೇರಿ, ಶಿವಮೊಗ್ಗ, ಚಿಕ್ಕಮಗಳೂರು, ಹಾಸನ ಹಾಗೂ ಕೊಡಗು ಜಿಲ್ಲೆಗಳಿಗೆ ಆರೆಂಜ್ ಅಲರ್ಟ್ ಮತ್ತು ಬಾಗಲಕೋಟೆ, ಗದಗ, ದಾವಣಗೆರೆ, ಮೈಸೂರು, ಮಂಡ್ಯ ಹಾಗೂ ಚಾಮರಾಜನಗರ ಜಿಲ್ಲೆಗಳಿಗೆ ಯೆಲ್ಲೊ ಅಲರ್ಟ್ ಘೋಷಿಸಿದೆ. ನೈಋತ್ಯ ಮುಂಗಾರು ಕರಾವಳಿ ಹಾಗೂ ದಕ್ಷಿಣ ಒಳನಾಡಿನಲ್ಲಿ ಸಾಧಾರಣವಾಗಿತ್ತು. ಉತ್ತರ ಒಳನಾಡಿನಲ್ಲಿ ದುರ್ಬಲವಾಗಿತ್ತು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**